## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 469 |
| ಸದಸ್ಯರ ಹೆಸರು | : | ಶ್ರೀ ಸಿ.ಪಿ. ಯೋಗೇಶ್ವರ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 19.07.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು, ವಿರುಪಸಮುದ್ರ ಗ್ರಾಮದ ಸರ್ವೆ ನಂ. 236/1, 236/2, 236/3 ರಲ್ಲಿ ದಿನಾಂಕ 25.09.2023 ರಂದು ದಸ್ತಾವೇಜು ಸಂಖ್ಯೆ 3157/2023-24ರ ಲೀಸ್‌ಡೀಡ್ ಮಾಡಿರುವುದು ಕಾನೂನು ಬಾಹಿರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೇ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ಒದಗಿಸುವುದು) | ಬಂದಿದೆ.<br><br>ಶ್ರೀ ಜಯಸಿಂಹ, ಗೌಡೇಟಿ, ಪಾವಗಡ ತಾಲ್ಲೂಕು ರವರಿಂದ ದಿನಾಂಕ:06-02-2024 ರಂದು ಸರ್ಕಾರಕ್ಕೆ ಮನವಿ ಸ್ವೀಕೃತವಾಗಿದ್ದು, ಮನವಿ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಮನವಿದಾರರಿಗೆ ಮಾಹಿತಿ ನೀಡುವಂತೆ ಹಾಗೂ ಅವಶ್ಯವಿದ್ದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 12 ಜಿಪಿಎಸ್ 2024 ದಿನಾಂಕ:23-02-2024 ರಂದು ಜಿಲ್ಲಾಧಿಕಾರಿ, ತುಮಕೂರು ಜಿಲ್ಲೆ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ರವರಿಗೆ ನಿರ್ದೇಶನ ನೀಡಲಾಗಿದೆ. |
| (ಆ) | ಸದರಿ ಲೀಸ್‌ಡೀಡ್ ಬಗ್ಗೆ ತಾಲ್ಲೂಕು ಪಂಚಾಯಿತಿ ಕಛೇರಿ ಹಾಗೂ ಗ್ರಾಮ ಪಂಚಾಯಿತಿ ಕಛೇರಿಗಳಿಗೆ ಬಂದಿರುವ ದೂರುಗಳು ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | ಸದರಿ ಲೀಸ್ ಡೀಡ್ ಬಗ್ಗೆ ಶ್ರೀ ಜಯಸಿಂಹ, ಗೌಡೇಟಿ, ಪಾವಗಡ ತಾಲ್ಲೂಕು ರವರಿಂದ ದಿನಾಂಕ:29-04-2024 ರಂದು ದೂರು ತಾಲ್ಲೂಕು ಪಂಚಾಯತಿಗೆ ಸ್ವೀಕೃತವಾಗಿರುತ್ತವೆ ಮತ್ತು ಗ್ರಾಮ ಪಂಚಾಯತಿ ವಿರುಪಸಮುದ್ರ ಇಲ್ಲಿಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ . |
| (ಇ) | ಬಂದಿರುವ ದೂರುಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬಂದಿರುವ ದೂರುಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.<br><br>1) ದಿನಾಂಕ:02-05-2024, 08-05-2024 ಹಾಗೂ 04-06-2024 ರಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ ರವರು ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ಕ್ರಮ ವಹಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಿರುಪಸಮುದ್ರ ಗ್ರಾಮ ಪಂಚಾಯತಿ, ಪಾವಗಡ ತಾಲ್ಲೂಕು ತುಮಕೂರು ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿದೆ.<br><br>2) ಸೇಲ್ ಡೀಡ್‌ಗೆ ಸಂಬಂಧಿಸಿದಂತೆ ವಿರುಪಸಮುದ್ರ ಗ್ರಾಮ ಪಂಚಾಯತಿಯಿಂದ NOC ನೀಡಿರುವುದಿಲ್ಲ. |

ಸಂಖ್ಯೆ: ಗ್ರಾಅಪ 469 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.